ಕನಕ ನಾಲಾ ತಿರುವು ಯೋಜನೆ

3202 (3039); ಶ್ರೀ ಪ್ರತಾಪಗೌಡ ಪಾಟೀಲ್ (ಮಸ್ಕಿ)

ಅ) ಕನಕ ನಾಲಾ ತಿರುವು ಯೋಜನೆಯನ್ನು ಜಾರಿಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಈ ಯೋಜನೆಯು ಜಾರಿಗೊಳ್ಳುವುದರಿಂದ ಎಷ್ಟು ಎಕರೆ ಜಮೀನು ನೀರಾವರಿಗೆ ಒಳಪಡುತ್ತದೆ ಹಾಗೂ ಎಷ್ಟು ಗ್ರಾಮಗಳು ಕುಡಿಯುವ ನೀರಿನ ಸಮಸ್ಯೆಯಿಂದ ಮುಕ್ತವಾಗುತ್ತವೆ;

ಇ) ಈ ಯೋಜನೆಯನ್ನು ಜಾರಿಗೊಳಿಸಲು ಬೇಕಾಗಿರುವ ಅನುದಾನವೆಷ್ಟು;

ಈ) ಈ ಯೋಜನೆಯನ್ನು ಯಾವಾಗ ಜಾರಿಗೊಳಿಸಲಾಗುವುದು (ವಿವರ ನೀಡುವುದು)?

ಶ್ರೀ ಎಂ.ಬಿ. ಪಾಟೀಲ್ (ಮಾನ್ಯ ಜಲ ಸಂಪನ್ಮೂಲ ಸಚಿವರು)

ಅ) ಮತ್ತು ಆ) ಕನಕ ನಾಲಾ ತಿರುವು ಯೋಜನೆಯ ಪ್ರಸ್ತಾವನೆ ಕರ್ನಾಟಕ ನೀರಾವರಿ ನಿಗಮದ ಹಂತದಲ್ಲಿ ಪರಿಶೀಲನೆಯಲ್ಲಿದೆ.

ಇ) ಮತ್ತು ಈ) ಸದರಿ ಯೋಜನೆಯ ಯೋಜನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನೀರಿನ ಲಭ್ಯತೆ ಬಗ್ಗೆ ಪರಿಶೀಲಿಸಿ, ಕ್ರಮ ಜರುಗಿಸಲಾಗುವುದು